# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 740

ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 20.12.2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಕೋವಿಡ್ ಸೋಂಕಿನ ಪ್ರಮಾಣ ಕಡಿಮೆಯಾದ ತರುವಾಯ ಶಾಲಾ ಕಾಲೇಜುಗಳು ಪ್ರಾರಂಭವಾಗಿದ್ದು, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣ ಏರಿಕೆ ಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಆ) | ದಾಖಲಾತಿ ಪ್ರಮಾಣ ಏರಿಕೆಯಿಂದ ಮಕ್ಕಳು ಶಿಥಿಲ ಕಟ್ಟಡಗಳಲ್ಲೇ ಪಾಠ ಪ್ರವಚನ ಆಲಿಸುತ್ತಿದ್ದು, ರಾಜ್ಯಾದ್ಯಂತ ಇರುವ ಸುಮಾರು ಐವತ್ತು ಸಾವಿರ ಶಾಲೆಗಳ ಪೈಕಿ ಎಂಟು ಸಾವಿರ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಇ) | ಬಂದಿದ್ದಲ್ಲಿ, ಇಂತಹ ಕಟ್ಟಡಗಳನ್ನು ದುರಸ್ಥಿಪಡಿಸಿ ಮಕ್ಕಳ ಜ್ಞಾನಾರ್ಜನೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಆದ್ಯತೆ ಮೇಲೆ ಕಲ್ಪಿಸಲಾಗುವುದೇ? | ಹೌದು,<br>ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಅಡ್ಡಿಯಾಗದಂತೆ ಶಿಥಿಲಗೊಂಡಿರುವ ಕಟ್ಟಡಗಳನ್ನು ದುರಸ್ಥಿಪಡಿಸಿ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ರಾಜ್ಯವಲಯ ಮುಂದುವರೆದ ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕೊಠಡಿಗಳ ನಿರ್ಮಾಣ ಮತ್ತು ದುರಸ್ಥಿಗೆ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ. |

**ಕೊಠಡಿಗಳ ನಿರ್ಮಾಣ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಬಿಡುಗಡೆ ಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018–19 | 1871 | 2909 | 17415.68 |
| 2019–20 | 632 | 973 | 21982.00 |
| 2020–21 | 1006 | 1483 | 9000.00 |
| **ಒಟ್ಟು** | **3509** | **5365** | **48397.68** |

**ಕೊಠಡಿಗಳ ದುರಸ್ಥಿ:**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಬಿಡುಗಡೆ ಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2018–19 | 2697 | 4195 | 4242.44 |
| 2019–20 | 1065 | 5003 | 3681.00 |
| 2020–21 | 187 | 187 | 476.11 |
| **ಒಟ್ಟು** | **3949** | **9385** | **8399.55** |

2021–22ನೇ ಸಾಲಿನಲ್ಲಿ ಕೊಠಡಿಗಳ ದುರಸ್ಥಿ, ನೂತನ ಶಾಲಾ ಕಟ್ಟಡಗಳ ನಿರ್ಮಾಣ, ಶಾಲಾ ಕೊಠಡಿಗಳ ನಿರ್ಮಾಣ, ಶೌಚಾಲಯ ನಿರ್ಮಾಣ ಮತ್ತು ದುರಸ್ಥಿ ಹಾಗೂ ಮೂಲಭೂತ ಸೌಲಭ್ಯಗಳಿಗಾಗಿ ರಾಜ್ಯದಾದ್ಯಂತ ರೂ.54118.67 ಲಕ್ಷಗಳು ನಿಗದಿಯಾಗಿದ್ದು, ಡಿಸೆಂಬರ್–2021ರ ಅಂತ್ಯಕ್ಕೆ ರೂ.33243.64 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.

ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಹಂತಹಂತವಾಗಿ ರಾಜ್ಯದಾದ್ಯಂತ ಶಾಲಾ ಕೊಠಡಿ ನಿರ್ಮಾಣ/ದುರಸ್ಥಿ ಕಾರ್ಯಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ.

**ಇಪಿ: 304 ಯೋಸಕ 2021**

(ಬಿ.ಸಿ.ನಾಗೇಶ್)

**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**